ವಿಷಯ:- ಧಾರವಾಡ ಜಿಲ್ಲಾ ಪಂಚಾಯತ್‌ಗೆ ಸ್ವಂತ ಕಟ್ಟಡ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 127 (471)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮಾಂತರ):- ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಧಾರವಾಡ ಜಿಲ್ಲಾ ಪಂಚಾಯತ್‌ಗೆ ಸ್ವಂತ ಕಟ್ಟಡ ಒದಗಿಸಲು ಸರ್ಕಾರದವರು ನಿರ್ಧರಿಸಿದೆಯೇ?

ಆ) ಹಾಗಿದ್ದಲ್ಲಿ ಕಟ್ಟಡದ ಜಾಗವನ್ನು ನಿರ್ಧರಿಸಲಾಗಿದೆಯೇ ಹಾಗೂ ಕಟ್ಟಡದ ನಿರ್ಮಾಣ ಕಾರ್ಯ ಎಂದಿನಿಂದ ಪ್ರಾರಂಭಿಸಲಾಗುವುದು?

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):-

ಅ) ಇಲ್ಲ.

ಆ) ಧಾರವಾಡ ಸಿಟಿ ಸರ್ವೆ ನಂ. 115 - ಎ ದಲ್ಲಿ ಖಾಲಿ ಇರುವ 3 ಎಕರೆ 28 ಗುಂಟೆ ಜಾಗವನ್ನು ಜಿಲ್ಲಾ ಪಂಚಾಯಿತಿ ಸ್ವಂತ ಕಟ್ಟಡಕ್ಕಾಗಿ ಮಂಜೂರು ಮಾಡಬೇಕೆಂದು ಜಿಲ್ಲಾ ಪಂಚಾಯಿತಿಯು ಜಿಲ್ಲಾಧಿಕಾರಿಗಳನ್ನು ಕೋರಿದೆ.

ವಿಷಯ:- ಹುಬ್ಬಳ್ಳಿಯ ಕೆ.ಎಂ.ಸಿ ಆಸ್ಪತ್ರೆಯಲ್ಲಿ ರೋಗಿಗಳಿಗೆ ಸರಿಯಾದ ಚಿಕಿತ್ಸೆ ನೀಡದೆ ಇರುವ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 128 (470)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮಾಂತರ):- ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

1. ಹುಬ್ಬಳ್ಳಿ ಕೆ.ಎಂ.ಸಿ ಆಸ್ಪತ್ರೆಯಲ್ಲಿ ರೋಗಿಗಳಿಗೆ ಸರಿಯಾದ ಚಿಕಿತ್ಸೆ (ಶಶ್ರೂಷೆ) ದೊರೆಯದಿರುವುದು ಹಾಗೂ ಔಷಧಿಗಳ ಕೊರತೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

2. ಹಾಗಿದ್ದಲ್ಲಿ ಈ ತೊಂಧರೆಗಳನ್ನು ಸುಧಾರಿಸಲು ಸರ್ಕಾರದವರು ಕೈಗೊಳ್ಳುವ ಕ್ರಮಗಳೇನು?

ಡಾ॥ ಎಂ.ಶಂಕರನಾಯಕ್ (ವೈದ್ಯಕೀಯ ಶಿಕ್ಷಣ ಸಚಿವರು):-

1. ಇಲ್ಲಾ.

2. ಉದ್ಭವಿಸುವುದಿಲ್ಲ.

ವಿಷಯ:- ಧಾರವಾಡ ಜಿಲ್ಲೆಯಲ್ಲಿ ಖಾಲಿ ಇರುವ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 129 (472)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮಾಂತರ):- ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಧಾರವಾಡ ಜಿಲ್ಲೆಯಲ್ಲಿ ಖಾಲಿ ಇರುವ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು? (ತಾಲ್ಲೂಕುವಾರು ವಿವರ ಒದಗಿಸುವುದು)

ಆ) ಈ ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರದವರು ಈವರೆಗೆ ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್.ಸಿ.ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):-

ಅ) ಒಟ್ಟು ಖಾಲಿ ಇರುವ ಹುದ್ದೆಗಳು 1,523.

ತಾಲ್ಲೂಕುವಾರು ವಿವರ ಹೀಗಿದೆ:

ತಾಲ್ಲೂಕಿನ ಹೆಸರು	ಹುದ್ದೆಗಳ ಸಂಖ್ಯೆ	ತಾಲ್ಲೂಕಿನ ಹೆಸರು	ಹುದ್ದೆಗಳ ಸಂಖ್ಯೆ
1. ಬ್ಯಾಡಗಿ	54	11. ನರಗುಂದ	18
2. ಧಾರವಾಡ	70	12. ನವಲಗುಂದ	33
3. ಗದಗ	21	13. ರಾಣೆಬೆನ್ನೂರು	121
4. ಹಾನಗಲ್ಲ	144	14. ರೋಣ	70
5. ಹಾವೇರಿ	104	15. ಸವಣೂರು	77
6. ಹಿರೇಕೆರೂರು	84	16. ಶಿಗ್ಗಾವ	51
7. ಹುಬ್ಬಳ್ಳಿ	31	17. ಶಿರಹಟ್ಟಿ	31
8. ಕಲಘಟಗಿ	51	18. ಹುಬ್ಬಳ್ಳಿ ಶಹರ	59
9. ಕುಂದಗೋಳ	51	19. ಗದಗ ಶಹರ	17
10. ಮುಂಡರಗಿ	36		

ಹೊಸದಾಗಿ ಮಂಜೂರಾದ ಹೆಚ್ಚುವರಿ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳು 400 ಆಗಿದ್ದು ತಾಲ್ಲೂಕುವಾರು ವಿಂಗಡ ಮಾಡಿರುವುದಿಲ್ಲ.